**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 50 (48) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13-02-2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪದವಿ ಪೂರ್ವ ಶಿಕ್ಷಣ ಇಲಾಖೆಯ ಬೋಧಕೇತರ ಹುದ್ದೆಗಳನ್ನು ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಉನ್ನತೀಕರಿಸಲಾಗುವುದು; (ಮಾಹಿತಿ ನೀಡುವುದು) | ಹೌದು.<br>ಪದವಿ ಪೂರ್ವ ಶಿಕ್ಷಣ ಇಲಾಖೆಯ 30 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಅಧೀಕ್ಷಕರ ಹುದ್ದೆಗಳನ್ನಾಗಿ ಮತ್ತು 86 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದೆ. |
| ಆ) | ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ ಕಚೇರಿಗಳಿಗೆ ಕಾರ್ಯಭಾರ ಹಂಚಿಕೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ಹಾಗೂ ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು) | ಹೌದು,<br>ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿ/ ಸಿಬ್ಬಂದಿಗಳಿಗೆ ದೊರಕಬಹುದಾದ ಸೌಲಭ್ಯಗಳನ್ನು ಮಂಜೂರು ಮಾಡಲು ನಿರ್ದೇಶಕರಿಗೆ ಇರುವ ಅಧಿಕಾರಗಳ ಪೈಕಿ ಕೆಲವು ಅಧಿಕಾರಗಳನ್ನು ಜಿಲ್ಲಾ ಮಟ್ಟದ ಜಿಲ್ಲಾ ಉಪ ನಿರ್ದೇಶಕರ ಹಂತದಲ್ಲಿ ಮಂಜೂರು ಮಾಡಲು ಅನುಕೂಲವಾಗುವಂತೆ ಅಧಿಕಾರ ಪ್ರತ್ಯಾಯೋಜನೆ ಮಾಡುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿದೆ. |
| ಇ) | ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಗ್ರಂಥಾಲಯ, ಮುದ್ರಣ ಇಲಾಖೆಯಗಳಲ್ಲಿರುವ ನೌಕರರ ಸಂಘಗಳು ಎಷ್ಟು; | ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಒಂದು ಸಂಘ ಇರುತ್ತದೆ.<br>ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಎರಡು ಸಂಘಗಳಿವೆ.<br>ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಯಾವುದೇ ನೌಕರರ ಸಂಘಗಳು ಇರುವುದಿಲ್ಲ.<br>ಸಾರ್ವಜನಿಕ ಮುದ್ರಣ ಇಲಾಖೆಯಲ್ಲಿ ಮೂರು ಸಂಘಗಳಿವೆ. |
| ಈ) | ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರ ಕಚೇರಿಯಲ್ಲಿರುವ ಕಾರ್ಯಭಾರದ ಒತ್ತಡ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಲ್ಲಿಯವರೆಗೂ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರ ಕಚೇರಿಯಲ್ಲಿರುವ ಕಾರ್ಯಭಾರದ ಒತ್ತಡ ಕಡಿಮೆ ಮಾಡುವ ಉದ್ದೇಶದಿಂದ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಕೆಲವು ಆಡಳಿತಾತ್ಮಕ ಮತ್ತು ಆರ್ಥಿಕ ಅಧಿಕಾರಗಳನ್ನು ಪ್ರತ್ಯಾಯೋಜಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.<br>ಪ್ರಸಕ್ತ ಸಾಲಿನಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿದ್ದ ದ್ವಿತೀಯ ಪಿಯುಸಿ ಪರೀಕ್ಷಾ ವಿಭಾಗವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಗೆ ಸ್ಥಳಾಂತರಿಸಲಾಗಿದೆ. |

**ಸಂಖ್ಯೆ: ಇಪಿ 29 ಡಿಜಿಡಬ್ಲ್ಯೂ 2023**

(ಬಿ.ಸಿ.ನಾಗೇಶ್)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು